All India Radio: Bangalore
National Bulletins In Kannada
13.07.2025 / 1.10pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ವಿವಿಧ ವಲಯದ ನಾಲ್ವರು ಸಾಧಕರನ್ನು ರಾಜ್ಯಸಭೆಗೆ ನಾಮ ನಿರ್ದೇಶನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು; ಪ್ರಧಾನಿ ಅಭಿನಂದನೆ
- ಸಚಿವ ಡಾ.ಜೈಶಂಕರ್ ಸಿಂಗಾಪುರ ಭೇಟಿ; ವಿದೇಶಾಂಗ ವ್ಯವಹಾರಗಳ ಸಚಿವರ ಜೊತೆ ದ್ವಿಪಕ್ಷೀಯ ಬಲವರ್ಧನೆ ಕುರಿತು ಚರ್ಚೆ
- ಆಕ್ಸಿಯಾಮ್-೪ ಮಿಷನ್; ಭಾರತೀಯ ಶುಭಾಂಶು ಶುಕ್ಲಾ ಸೇರಿ ನಾಲ್ವರು ಗಗನಯಾತ್ರಿಗಳ ನಾಳೆ ಭೂಮಿಯತ್ತ ಪಯಣ
- ಭಾರತ - ಇಂಗ್ಲೆಂಡ್ ೩ನೇ ಟೆಸ್ಟ್ ಕ್ರಿಕೆಟ್: ಇಂದು ನಾಲ್ಕನೇದಿನದಾಟ ಆರಂಭ
- ವಿಂಬಲ್ಡನ್ ಟೆನಿಸ್: ಪುರುಷರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿಂದು ಕಾರ್ಲೋಸ್ ಅಲ್ಕರಾಜ್ - ಜನ್ನಿಕ್ ಸಿನ್ನರ್ ಮುಖಾಮುಖಿ

><><><><><><><><

ಖ್ಯಾತ ವಕೀಲ ಉಜ್ವಲ್ ದೇವರಾವ್ ನಿಕ್ಕಂ, ಸಮಾಜ ಸೇವಕ ಸಿ.ಸದಾನಂದನ್ ಮಾಸ್ಟರ್, ಮಾಜಿ ವಿದೇಶಾಂಗ ಕಾರ್ಯದರ್ಶಿ ಹರ್ಷವರ್ಧನ್ ಶ್ರಿಂಗ್ಲಾ ಮತ್ತು ಇತಿಹಾಸಕಾರ್ತಿ ಮತ್ತು ಚಿಂತಕಿ ಡಾ.ಮೀನಾಕ್ಷಿ ಜೈನ್ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಲಾಗಿದೆ. ಈ ನಿರ್ಧಾರದ ಬಗ್ಗೆ ಗೃಹ ಸಚಿವಾಲಯ ಅಧಿಸೂಚನೆಯಲ್ಲಿ ಮಾಹಿತಿ ನೀಡಿದೆ. ಮಹಾರಾಷ್ಟ್ರ ಮೂಲದ ನಿಕ್ಕಂ ಮುಂಬೈ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ಸರ್ಕಾರಿ ವಕೀಲರಾಗಿ ಸೇವೆ ಸಲ್ಲಿಸಿದ್ದಾರೆ. ಕೇರಳದ ಸಿ.ಸದಾನಂದನ್ ಮಾಸ್ಟರ್ ಅವರು ಶಿಕ್ಷಣದಲ್ಲಿ ಸುದೀರ್ಘ ವೃತ್ತಿಜೀವನವನ್ನು ಹೊಂದಿದ್ದಾರೆ. ಅವರು ರಾಜಕೀಯ ಹಿಂಸಾಚಾರದಲ್ಲಿ ಅವರ ಎರಡೂ ಕಾಲುಗಳನ್ನು ಕಳೆದುಕೊಂಡಿದ್ದಾರೆ. ಶ್ರಿಂಗ್ಲಾ ಅವರು ಅಮೆರಿಕ, ಬಾಂಗ್ಲಾದೇಶ ಮತ್ತು ಥಾಯ್ಲೆಂಡ್ ನಲ್ಲಿ ರಾಯಭಾರಿಯಾಗಿಯೂ ಸೇವೆ ಸಲ್ಲಿಸಿದ್ದಾರೆ. ಅವರು ೨೦೨೩ ರಲ್ಲಿ ಭಾರತದ ಜಿ ೨೦ ಅಧ್ಯಕ್ಷತೆಯ ಮುಖ್ಯ ಸಂಯೋಜಕರಾಗಿ ಸೇವೆ ಸಲ್ಲಿಸಿದರು. ಜೈನ್ ಅವರು ದೆಹಲಿ ವಿಶ್ವವಿದ್ಯಾಲಯದ ಗಾರ್ಗಿ ಕಾಲೇಜಿನಲ್ಲಿ ಇತಿಹಾಸದ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ. ಕಲೆ, ಸಾಹಿತ್ಯ, ವಿಜ್ಞಾನ ಮತ್ತು ಸಾಮಾಜಿಕ ಸೇವೆಗಳಿಗೆ ನೀಡಿದ ಕೊಡುಗೆಗಳಿಗಾಗಿ ರಾಷ್ಟ್ರಪತಿ ಅವರು ೧೨ ಜನರನ್ನು ಸಂಸತ್ತಿನ ಮೇಲ್ಮನೆಗೆ ನಾಮನಿರ್ದೇಶನ ಮಾಡುತ್ತಾರೆ.

><><><><><><><><

ರಾಜ್ಯಸಭೆಗೆ ನಾಮನಿರ್ದೇಶನಗೊಂಡ ಖ್ಯಾತ ವಕೀಲ ಉಜ್ವಲ್ ದೇವರಾವ್ ನಿಕ್ಕಂ, ಸಾಮಾಜಿಕ ಕಾರ್ಯಕರ್ತ ಸಿ.ಸದಾನಂದನ್ ಮಾಸ್ಟರ್, ಮಾಜಿ ವಿದೇಶಾಂಗ ಕಾರ್ಯದರ್ಶಿ ಹರ್ಷವರ್ಧನ್ ಶ್ರಿಂಗ್ಲಾ ಮತ್ತು ಇತಿಹಾಸಕಾರ್ತಿ ಮತ್ತು ಶಿಕ್ಷಣ ತಜ್ಞೆ ಡಾ.ಮೀನಾಕ್ಷಿ ಜೈನ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಈ ಕುರಿತು ಸರಣಿ ಟ್ವೀಟ್ ಮಾಡಿರುವ ಪ್ರಧಾನಿ, ಉಜ್ವಲ್ ನಿಕ್ಕಂ ಅವರ ಕಾನೂನು ಕ್ಷೇತ್ರ ಮತ್ತು ಸಂವಿಧಾನದ ಮೇಲಿನ ಭಕ್ತಿ ಅನುಕರಣೀಯವಾಗಿದೆ. ತಾವು ಯಶಸ್ವಿ ವಕೀಲರಾಗಿದ್ದಷ್ಟೇ ಅಲ್ಲ, ಪ್ರಮುಖ ಪ್ರಕರಣಗಳಲ್ಲಿ ನ್ಯಾಯ ದೊರಕಿಸಿಕೊಡುವಲ್ಲಿಯೂ ಮುಂಚೂಣಿಯಲ್ಲಿದ್ದರು ಎಂದು ತಿಳಿಸಿದ್ದಾರೆ. ತಮ್ಮ ಇಡೀ ಕಾನೂನು ವೃತ್ತಿಜೀವನದಲ್ಲಿ, ನಿಕ್ಕಂ ಅವರು ಯಾವಾಗಲೂ ಸಾಂವಿಧಾನಿಕ ಮೌಲ್ಯಗಳನ್ನು ಬಲಪಡಿಸಲು ಮತ್ತು ಸಾಮಾನ್ಯ ನಾಗರಿಕರನ್ನು ಯಾವಾಗಲೂ ಘನತೆಯಿಂದ ಕಾಣುವುದನ್ನು ಖಚಿತಪಡಿಸಿಕೊಳ್ಳಲು ಕೆಲಸ ಮಾಡಿದ್ದಾರೆ ಎಂದು ಅವರು ಹೇಳಿದರು. ಹರ್ಷವರ್ಧನ್ ಶ್ರಿಂಗ್ಲಾ ಅವರು ರಾಜತಾಂತ್ರಿಕ, ಬೌದ್ಧಿಕ ಮತ್ತು ಕಾರ್ಯತಂತ್ರದ ಚಿಂತಕರಾಗಿ ಉತ್ತಮ ಸಾಧನೆ ಮಾಡಿದ್ದಾರೆ. ಹಲವು ವರ್ಷಗಳಿಂದ ಅವರು ಭಾರತದ ವಿದೇಶಾಂಗ ನೀತಿಗೆ ಪ್ರಮುಖ ಕೊಡುಗೆಗಳನ್ನು ನೀಡಿದ್ದಾರೆ ಜಿ ೨೦ ಅಧ್ಯಕ್ಷ ಸ್ಥಾನ ಗಿಟ್ಟಿಸುವಲ್ಲಿ ಕೊಡುಗೆ ನೀಡಿದ್ದಾರೆ ಎಂದು ಅವರು ಹೇಳಿದ್ದಾರೆ. ಸದಾನಂದನ್ ಅವರನ್ನು ಅಭಿನಂದಿಸಿದ ಪ್ರಧಾನಿ, ಅವರ ಜೀವನವು ಧೈರ್ಯ ಮತ್ತು ಅನ್ಯಾಯಕ್ಕೆ ತಲೆಬಾಗಲು ನಿರಾಕರಿಸುವ ಸಂಕೇತವಾಗಿದೆ ಎಂದು ತಿಳಿಸಿದ್ದಾರೆ.

ಡಾ.ಮೀನಾಕ್ಷಿ ಜೈನ್ ಅವರು ವಿದ್ವಾಂಸ, ಸಂಶೋಧಕಿ ಮತ್ತು ಇತಿಹಾಸಕಾರರಾಗಿ ಗುರುತಿಸಿಕೊಂಡಿದ್ದಾರೆ. ಶಿಕ್ಷಣ, ಸಾಹಿತ್ಯ, ಇತಿಹಾಸ ಮತ್ತು ರಾಜ್ಯಶಾಸ್ತ್ರ ಕ್ಷೇತ್ರಗಳಲ್ಲಿ ಅವರು ಮಾಡಿದ ಕೆಲಸಗಳು ಶೈಕ್ಷಣಿಕ ಸಂವಾದವನ್ನು ಗಮನಾರ್ಹವಾಗಿ ಶ್ರೀಮಂತಗೊಳಿಸಿವೆ ಎಂದು ಪ್ರಧಾನಿ ಹೇಳಿದ್ದಾರೆ.

><><><><><><><><><><><><

ಸಿಂಗಾಪುರ ಪ್ರವಾಸದಲ್ಲಿರುವ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದು ಸಿಂಗಾಪುರದ ವಿದೇಶಾಂಗ ಸಚಿವ ವಿವಿಯನ್ ಬಾಲಕೃಷ್ಣನ್ ಅವರನ್ನು ಭೇಟಿಯಾದರು. ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ.ಜೈಶಂಕರ್, ಸಿಂಗಾಪುರವು ಭಾರತದ ಆಕ್ಟ್ ಈಸ್ಟ್ ನೀತಿಯ ಹೃದಯಭಾಗದಲ್ಲಿದೆ ಎಂದು ಹೇಳಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವರು ಇಂದು ಟೆಮಾಸೆಕ್ ಹೋಲ್ಡಿಂಗ್ಸ್ ನ ನಿಯೋಜಿತ ಅಧ್ಯಕ್ಷ ಟಿಯೊ ಚೀ ಹೀನ್ ಅವರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಅವರು ಭಾರತದಲ್ಲಿ ನಡೆಯುತ್ತಿರುವ ಪರಿವರ್ತನೆ ಮತ್ತು ಅದರ ಹೂಡಿಕೆ ಅವಕಾಶಗಳ ಬಗ್ಗೆ ಚರ್ಚಿಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ, ವಿವಿಯನ್ ಬಾಲಕೃಷ್ಣನ್ ಅವರು ಜಗತ್ತು ಅನಿವಾರ್ಯವಾಗಿ ಬಹು-ಧ್ರುವೀಯತೆಗೆ ಪರಿವರ್ತನೆಗೊಳ್ಳುತ್ತಿದ್ದಂತೆ, ಭಾರತವು ಅವಕಾಶಗಳ ಈ ಪ್ರಮುಖ ಧ್ರುವಗಳಲ್ಲಿ ಒಂದಾಗಿ ಹೆಚ್ಚು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದ್ದಾರೆ. ಸಿಂಗಾಪುರ ಭೇಟಿಯ ನಂತರ, ವಿದೇಶಾಂಗ ವ್ಯವಹಾರಗಳ ಸಚಿವರು ಎಸ್ ಸಿಒ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಲು ಚೀನಾದ ಟಿಯಾಂಜಿನ್ ತಲುಪಲಿದ್ದಾರೆ. ಸಭೆಯ ಹೊರತಾಗಿ ಅವರು ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

><><><><><><><><><

ಭಾರತೀಯ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಮತ್ತು ಆಕ್ಸಿಯಮ್ -೪ ಮಿಷನ್‌ನ ಇತರ ಮೂವರು ಸಿಬ್ಬಂದಿ ನಾಳೆಯಿಂದ ಹಿಂದಿರುಗುವ ಪ್ರಯಾಣ ಪ್ರಾರಂಭಿಸಲಿದ್ದಾರೆ. ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಅವರು, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ನಾಳೆ ಸಂಜೆ ೪:೩೦ ಕ್ಕೆ ಸಮಯ ನಿಗದಿಪಡಿಸಲಾಗಿದ್ದು, ಮಂಗಳವಾರ ಮಧ್ಯಾಹ್ನ ೩:೦೦ ಗಂಟೆಗೆ ಸಿಬ್ಬಂದಿ ಭೂಮಿಗೆ ಮರಳಲಿದ್ದಾರೆ ಎಂದು ಅವರು ಹೇಳಿದ್ದಾರೆ. ಗ್ರೂಪ್ ಕ್ಯಾಪ್ಟನ್ ಶುಕ್ಲಾ ಅವರು ೧೮ ದಿನಗಳ ಕಾಲ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿದ್ದಾರೆ. ೧೯೮೪ ರಲ್ಲಿ ಬಾಹ್ಯಾಕಾಶಕ್ಕೆ ತೆರಳಿದ್ದ ವಿಂಗ್ ಕಮಾಂಡರ್ ರಾಕೇಶ್ ಶರ್ಮಾ ನಂತರ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ ಮೊದಲ ಭಾರತೀಯ ಮತ್ತು ಎರಡನೇ ಭಾರತೀಯ ಗಗನಯಾತ್ರಿ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಈ ಪ್ರಯಾಣದಲ್ಲಿ ಗ್ರೂಪ್ ಕ್ಯಾಪ್ಟನ್ ಶುಕ್ಲಾ ಏಳು ಭಾರತ-ನಿರ್ದಿಷ್ಟ ಪ್ರಯೋಗಗಳನ್ನು ಮಾಡಿದ್ದಾರೆ.

><><><><><><><><><

ದೆಹಲಿಯ ಅಖಿಲ ಭಾರತ ಆಯುರ್ವೇದ ಸಂಸ್ಥೆ  ಶುಭ ಸುಶ್ರುತ ಜಯಂತಿಯ ಆಚರಣೆಯಲ್ಲಿ ಇಂದಿನಿಂದ ಮೂರು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣವಾದ ಶಲ್ಯಕಾನ್ ೨೦೨೫ ಅನ್ನು ಆಯೋಜಿಸುತ್ತಿದೆ. ಶಸ್ತ್ರಚಿಕಿತ್ಸೆಯ ಪಿತಾಮಹ ಎಂದು ಪೂಜಿಸಲ್ಪಡುವ ಪ್ರಸಿದ್ಧ ಆಚಾರ್ಯ ಸುಶ್ರುತನ ನೆನಪಿಗಾಗಿ ಪ್ರತಿವರ್ಷ ಜುಲೈ ೧೫ರಂದು ಸುಶ್ರುತ ಜಯಂತಿಯನ್ನು ಆಚರಿಸಲಾಗುತ್ತದೆ.

><><><><><><><><><

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯವು ಪ್ರತಿಷ್ಠಿತ ತೇನ್ ಜಿಂಗ್ ನಾರ್ಗೆ ರಾಷ್ಟ್ರೀಯ ಸಾಹಸ ಪ್ರಶಸ್ತಿ ೨೦೨೪ ಕ್ಕೆ ನಾಮನಿರ್ದೇಶನಗಳನ್ನು ತೆರೆಯುವುದಾಗಿ ಘೋಷಿಸಿದೆ. ಈ ಪ್ರಶಸ್ತಿಯು ಸಾಹಸದಲ್ಲಿ ಅತ್ಯುತ್ತಮ ಸಾಧನೆಗಳನ್ನು ಗುರುತಿಸುತ್ತದೆ. ಸಹಿಷ್ಣುತೆ, ಅಪಾಯವನ್ನು ತೆಗೆದುಕೊಳ್ಳುವ ಸಾಮರ್ಥ್ಯ, ಸಹಕಾರಿ ತಂಡದ ಕೆಲಸ ಮತ್ತು ಸವಾಲಿನ ಸಂದರ್ಭಗಳಲ್ಲಿ ಯುವಕರಲ್ಲಿ ತ್ವರಿತ ಪ್ರತಿಫಲನಗಳನ್ನು ಬೆಳೆಸುವ ಗುರಿಯನ್ನು ಹೊಂದಿದೆ.

><><><><><><><><><

ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದ ನಾಲ್ಕನೇ ದಿನವಾದ ಇಂದು ಆತಿಥೇಯ ಇಂಗ್ಲೆಂಡ್ ಭಾರತ ವಿರುದ್ಧ ಎರಡನೇ ಇನಿಂಗ್ಸ್ ಪಂದ್ಯವನ್ನು ಪುನರಾರಂಭಿಸಲಿದೆ. ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಮೂರನೇ ದಿನದಾಟದ ಅಂತ್ಯಕ್ಕೆ ಇಂಗ್ಲೆಂಡ್ ವಿಕೆಟ್ ನಷ್ಟವಿಲ್ಲದೆ ೨ ರನ್ ಗಳಿಸಿದೆ. ಈ ಮೂಲಕ ೨ ರನ್ ಗಳ ಮುನ್ನಡೆ ಸಾಧಿಸಿದೆ. ಇದಕ್ಕೂ ಮುನ್ನ ಭಾರತ ತನ್ನ ಮೊದಲ ಇನಿಂಗ್ಸ್ ನಲ್ಲಿ ೩೮೭ ರನ್ ಗಳಿಗೆ ಆಲೌಟ್ ಆಗಿದ್ದು, ಇಂಗ್ಲೆಂಡ್ ನ ಮೊದಲ ಇನಿಂಗ್ಸ್ ಮೊತ್ತವನ್ನು ೩೮೭ ರನ್ ಗಳಿಗೆ ಸರಿಗಟ್ಟಿದೆ. ಕೆಎಲ್ ರಾಹುಲ್ ಶತಕ ಬಾರಿಸಿದರೆ, ರಿಷಭ್ ಪಂತ್ ೭೪ ಮತ್ತು ರವೀಂದ್ರ ಜಡೇಜಾ ೭೨ ರನ್ ಗಳಿಸಿದರು.

೧೯೭೪-೭೫ರಲ್ಲಿ ಭಾರತದ ವಿರುದ್ಧ ವೆಸ್ಟ್ ಇಂಡೀಸ್ ನಿರ್ಮಿಸಿದ್ದ ೩೨ ಸಿಕ್ಸರ್ ಗಳ ದಾಖಲೆಯನ್ನು ಮುರಿದಿರುವ ಭಾರತ, ವಿದೇಶದಲ್ಲಿ ಟೆಸ್ಟ್ ಸರಣಿಯಲ್ಲಿ ಅತಿ ಹೆಚ್ಚು ಸಿಕ್ಸರ್ ಸಿಡಿಸಿದ ವಿಶ್ವದಾಖಲೆ ನಿರ್ಮಿಸಿದೆ.  ಗಮನಾರ್ಹವಾಗಿ, ಈ ಮೈಲಿಗಲ್ಲು ಐದು ಟೆಸ್ಟ್ ಸರಣಿಯಲ್ಲಿ ಕೇವಲ ಮೂರು ಪಂದ್ಯಗಳಲ್ಲಿ ಬಂದಿದೆ.

><><><><><><><><

ವಿಂಬಲ್ಡನ್ ಟೆನಿಸ್ ಟೂರ್ನಿಯಲ್ಲಿ ಪುರುಷರ ವಿಭಾಗದ ಫೈನಲ್‌ನಲ್ಲಿಂದು ವಿಶ್ವದ ನಂ.೧ ಆಟಗಾರ ಇಟಲಿಯ ಜನಿಕ್ ಸಿನ್ನರ್ ಎರಡನೇ ಶ್ರೇಯಾಂಕಿತ ಹಾಗೂ ಎರಡು ಬಾರಿಯ ಹಾಲಿ ಚಾಂಪಿಯನ್ ಸ್ಪೇನ್ ನ ಕಾರ್ಲೋಸ್ ಅಲ್ಕರಾಜ್ ಸೆಣಸಲಿದ್ದಾರೆ. ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಆಲ್ ಇಂಗ್ಲೆಂಡ್ ಕ್ಲಬ್ ನಲ್ಲಿ ಕಳೆದ ರಾತ್ರಿ ನಡೆದ ಏಕಪಕ್ಷೀಯ ಫೈನಲ್ ನಲ್ಲಿ ಅಮಂಡಾ ಅನಿಸಿಮೊವಾ ಅವರನ್ನು ಸೋಲಿಸುವ ಮೂಲಕ ವಿಂಬಲ್ಡನ್ ಟೆನಿಸ್‌ನಲ್ಲಿ, ಇಗಾ ಸ್ವಿಯಾಟೆಕ್ ತನ್ನ ಮೊದಲ ಮಹಿಳಾ ಸಿಂಗಲ್ಸ್ ಪ್ರಶಸ್ತಿ ಜಯಿಸಿದ್ದಾರೆ. ಪೋಲೆಂಡ್ ನ ಸ್ವಿಯಾಟೆಕ್, ಅಮೆರಿಕದ ಅಮಂಡಾ ಅನಿಸಿಮೊವಾ ಅವರನ್ನು ಕೇವಲ ೫೭ ನಿಮಿಷಗಳಲ್ಲಿ ೬-೦, ೬-೦ ಸೆಟ್ ಗಳಿಂದ ಸೋಲಿಸಿ ಆರನೇ ಗ್ರ್ಯಾಂಡ್ ಸ್ಲಾಮ್ ಪ್ರಶಸ್ತಿಯನ್ನು ಗೆದ್ದರು. ಜತೆಗೆ ವಿಂಬಲ್ಡನ್ ನಲ್ಲಿ ಮೊದಲ ಬಾರಿಗೆ ಚಾಂಪಿಯನ್ ಆಗಿದ್ದಾರೆ. ಈ ಗೆಲುವಿನೊಂದಿಗೆ ಪ್ರಶಸ್ತಿ ಗೆದ್ದ ಮೊದಲ ಪೋಲೆಂಡ್ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಏತನ್ಮಧ್ಯೆ, ಜೂಲಿಯನ್ ಕ್ಯಾಶ್ ಮತ್ತು ಲಾಯ್ಡ್ ಗ್ಲಾಸ್ಪೂಲ್ ವಿಂಬಲ್ಡನ್ ೨೦೨೫ ರಲ್ಲಿ ಇತಿಹಾಸ ನಿರ್ಮಿಸಿದ್ದಾರೆ. ೧೯೩೬ ರ ನಂತರ ಪುರುಷರ ಡಬಲ್ಸ್ ಪ್ರಶಸ್ತಿಯನ್ನು ಗೆದ್ದ ಮೊದಲ ಬ್ರಿಟಿಷ್ ಜೋಡಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

><><><><><><><><